# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಮಂಡಲ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ     ದಿನಾಂಕ : DATE : 13/12/19

# ಬೆಳಗಾವಿಯಲ್ಲಿ ಬಜೆಟ್ ಅಧಿವೇಶನ

13/12/19

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ಉಪಚುನಾವಣೆ ಗೆಲುವಿನ ಬಳಿಕ ಉತ್ಸಾಹದಲ್ಲಿರುವ ಮುಖ್ಯಮಂತ್ರಿ ಯಡಿಯೂರಪ್ಪ ಅವರ ನೇತೃತ್ವದ ಸರಕಾರ ಇದೀಗ, ತಮ್ಮ ಬಜೆಟ್ ಅಧಿವೇಶನವನ್ನು ಬೆಳಗಾವಿಯಲ್ಲಿ ನಡೆಸುವ ಚಿಂತನೆ ನಡೆಸಿದೆ.



• ರಾಜ್ಯಪಾಲರ ಆರೋಗ್ಯ ಸಮಸ್ಯೆಯಿಂದ 20ರಿಂದ ಜಂಟಿ ಅಧಿವೇಶನ ರಾಜಧಾನಿಯಲ್ಲಿ

ಉತ್ತರ ಕರ್ನಾಟಕ ಭಾಗದಲ್ಲಿ ಈ ಬಾರಿ ಭಾರಿ ಪ್ರವಾಹ ಹಾಗೂ ನೆರೆ ಸಂಭವಿಸಿದ್ದರೆ ಬೆಳಗಾವಿಯ ಸುವರ್ಣ ಸೌಧದಲ್ಲಿ ಚಳಿಗಾಲದ ಅಧಿವೇಶನ ನಡೆಸಲು ಸಾಧ್ಯವಾಗಲಿಲ್ಲ. ಈ ಬಗ್ಗೆ ಪ್ರತಿಪಕ್ಷಗಳು ಬಿಜೆಪಿ ಸರಕಾರದ ವಿರುದ್ಧ ಟೀಕಾಪ್ರಹಾರ ನಡೆಸಿದ್ದವು. ಆದರೀಗ ಉತ್ತರ ಕರ್ನಾಟಕದ ಜನರಿಗೆ ಗಿಫ್ಟ್ ರೀತಿ, ಮೊದಲ ಬಾರಿಗೆ ಬೆಳಗಾವಿಯಲ್ಲಿ ಬಜೆಟ್ ಅಧಿವೇಶನ ನಡೆಸುವ ಬಗ್ಗೆ ಸರಕಾರದ ಮಟ್ಟದಲ್ಲಿ ಚಿಂತನೆ ನಡೆದಿದೆ ಎಂದು ಮೂಲಗಳು ತಿಳಿಸಿವೆ.

ಉತ್ತರ ಕರ್ನಾಟಕದಲ್ಲಿ ಅಧಿವೇಶನ ನಡೆಸಲು ಸರಕಾರಕ್ಕೆ ಮನಸ್ಸಿಲ್ಲ ಎನ್ನುವ ಪ್ರತಿಪಕ್ಷಗಳ ಆರೋಪಕ್ಕೆ, ಪ್ರತ್ಯಾಸ್ತ್ರ ಎನ್ನುವ ರೀತಿ ಇದನ್ನು ಬಳಸಿಕೊಳ್ಳುವ ಬಗ್ಗೆ ಸರಕಾರ ಚಿಂತನೆ ನಡೆಸಿದೆ.

## ಜ.20ರಿಂದ ಜಂಟಿ ಅಧಿವೇಶನ

ಗುರುವಾರ ನಡೆದ ಸಚಿವ-ಸಂಪುಟ ಸಭೆಯಲ್ಲಿ, ವಿಧಾನಮಂಡಳ ಜಂಟಿ ಅಧಿವೇಶವನ್ನು ಜ.20ರಿಂದ 30ರವರೆಗೆ ನಡೆಸಲು ತೀರ್ಮಾನಿಸಲಾಗಿದೆ. 10 ನಡೆಯಲಿರುವ ಅಧಿವೇಶನದಲ್ಲಿ ಎರಡು ದಿನ ರಜಾ ದಿನವಿರಲಿದ್ದು, ಬಾಕಿ ಎಂಟು ದಿನಗಳ ಕಾಲ ಅಧಿವೇಶನ ನಡೆಯಲಿದೆ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಜೆ.ಸಿ ಮಾಧುಸ್ವಾಮಿ ತಿಳಿಸಿದರು. ಜ.20 ರಂದು ರಾಜ್ಯಪಾಲ ವಜೂಭಾಯಿ ವಾಲಾ ಅವರು ಜಂಟಿ ಅಧಿವೇಶನ ಉದ್ದೇಶಿಸಿ ಭಾಷಣಮಾಡಲಿದ್ದಾರೆ. ಅಧಿವೇಶನ ಕರೆಯುವಂತೆ ರಾಜ್ಯಪಾಲರಿಗೆ ಮನವಿ ಮಾಡುತ್ತಿದ್ದು, ಈ ಅಧಿವೇಶನ ಬೆಂಗಳೂರಿನಲ್ಲಿ ನಡೆಯಲಿದೆ. ವಿವಿಧ ಬಿಲ್‌ಗಳನ್ನು ಅಧಿವೇಶನದಲ್ಲಿ ತರಬೇಕಿದ್ದು, ಒಂದು ವೇಳೆ ಅಗತ್ಯವಿದ್ದರೆ ದಿನ ಹೆಚ್ಚಿಸುವ ಬಗ್ಗೆ ಚರ್ಚಿಸಲಾಗುವುದು ಎಂದರು.

ಸರಕಾರದ ಬಜೆಟ್ ಅನ್ನೇ ಬೆಳಗಾವಿಯಲ್ಲಿ ನಡೆಸುವುದರಿಂದ, ಉತ್ತರ ಕರ್ನಾಟಕವನ್ನು ಸರಕಾರ ನಿರ್ಲಕ್ಷ್ಯ ಮಾಡಿಲ್ಲ ಎನ್ನುವ ಸಂದೇಶ ರವಾನಿಸುವ ಲೆಕ್ಕಾಚಾರದಲ್ಲಿ ಮುಖ್ಯಮಂತ್ರಿ ಯಡಿಯೂರಪ್ಪ ಅವರಿದ್ದಾರೆ ಎಂದು ಮೂಲಗಳು ತಿಳಿಸಿವೆ.

→ 4

# ಬೆಳಗಾವಿಯಲ್ಲಿ ಬಜೆಟ್ ಅಧಿವೇಶನ?

← ಮೊದಲಪುಟದಿಂದ

ವಿಶ್ವವಾಣಿ 13/12/19

ಈ ಸಂಬಂಧ ಸಚಿವರೊಂದಿಗೆ ಹಾಗೂ ಮುಖ್ಯ ಕಾರ್ಯದರ್ಶಿಗಳೊಂದಿಗೆ ಯಡಿಯೂರಪ್ಪ ಅವರು ಚರ್ಚಿಸಿದ್ದಾರೆ. ಉತ್ತರ ಕರ್ನಾಟಕದಲ್ಲಿ ಬಜೆಟ್ ಅಧಿವೇಶನ ನಡೆಸುವುದರಿಂದ ಸರಕಾರಕ್ಕೆ 'ಮೈಲೇಜ್' ಸಿಗಲಿದೆ ಎನ್ನುವ ಮಾತನ್ನು ಸಚಿವರು ಹೇಳಿದ್ದಾರೆ. ಆದರೆ ಅಧಿಕಾರಿಗಳು, ಬಜೆಟ್ ಅಧಿವೇಶನವನ್ನು ಬೆಳಗಾವಿಯಲ್ಲಿ ನಡೆಸಲು ಕೆಲ ಸಮಸ್ಯೆಗಳಿವೆ. ಚಳಿಗಾಲದ ಅಧಿವೇಶನವನ್ನು ಬೆಳಗಾವಿಯಲ್ಲಿ ನಡೆಸುವುದಕ್ಕೆ ಅನೇಕ ಸಮಸ್ಯೆಗಳು ಎದುರಾಗುತ್ತವೆ. ಇನ್ನು ಬಜೆಟ್ ಅನ್ನು ಅಲ್ಲಿ ಮಾಡುವುದಕ್ಕೆ ಮತ್ತಷ್ಟು ತಯಾರಿ ಅಗತ್ಯ ಎನ್ನುವ ಮಾತಗಳನ್ನಾಡಿದ್ದಾರೆ. ಆದ್ದರಿಂದ ಸಾಧಕ-ಬಾಧಕದ ಬಗ್ಗೆ ಯಡಿಯೂರಪ್ಪ ಚಿಂತಿಸಿದ್ದಾರೆ ಎಂದು ತಿಳಿದುಬಂದಿದೆ.

**ರಾಜ್ಯಪಾಲರಿಗೋಸ್ಕರ ಬೆಂಗಳೂರಲ್ಲಿ ಅಧಿವೇಶನ:** ಜನವರಿ 20ರಿಂದ ಬೆಂಗಳೂರಿನಲ್ಲಿ ನಡೆಯಲಿರುವ ಜಂಟಿ ಅಧಿವೇಶನವನ್ನು ಬೆಂಗಳೂರಿನ ಬದಲು ಬೆಳಗಾವಿಯ ಸುವರ್ಣಸೌಧದಲ್ಲಿ ನಡೆಸುವ ಬಗ್ಗೆ ಸರಕಾರ ಚಿಂತನೆ ನಡೆಸಿತ್ತು. ಆದರೆ ರಾಜ್ಯಪಾಲ ವಿ.ಆರ್.ವಾಲಾ ಅವರಿಗೆ ಆರೋಗ್ಯದಲ್ಲಿ ವ್ಯತ್ಯಯವಾಗಿರುವುದರಿಂದ, ಅಷ್ಟು ದೂರ ಕ್ರಮಿಸುವುದು ಸಮಸ್ಯೆಯಾಗಲಿದೆ ಎನ್ನುವ ಕಾರಣಕ್ಕೆ ಇಲ್ಲಿಯೇ ನಡೆಸಲು ತೀರ್ಮಾನಿಸಲಾಗಿದೆ.

ಆದರೆ ಬಜೆಟ್ ಅಧಿವೇಶನದಲ್ಲಿ ರಾಜ್ಯಪಾಲರು ಭಾಗವಹಿಸುವ ಅವಶ್ಯಕತೆಯಿರುವುದಿಲ್ಲ. ಆದ್ದರಿಂದ ಮುಂದಿನ ತಿಂಗಳ ಜಂಟಿ ಅಧಿವೇಶವನ್ನು ಬೆಂಗಳೂರಿನಲ್ಲಿಯೇ ನಡೆಸಿ ರಾಜ್ಯಪಾಲರ ಭಾಷಣದ ಬಳಿಕ ಬಜೆಟ್ ಅಧಿವೇಶನ ಬೆಳಗಾವಿಯಲ್ಲಿ ನಡೆಸಲು ಚಿಂತಿಸಿದೆ. ಈ ಬಗ್ಗೆ ರಾಜಭವನದ ಅಧಿಕಾರಿಗಳೊಂದಿಗೂ ಸಂಸದೀಯ ವ್ಯವಹಾರಗಳ ಸಚಿವ ಮಾಧುಸ್ವಾಮಿ ಅವರು ಚರ್ಚಿಸಿದ್ದು, ಇದಕ್ಕೆ ಸಹಮತ ನೀಡಿದ್ದಾರೆ ಎಂದು ಮೂಲಗಳು ತಿಳಿಸಿವೆ.